ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 90 ಪಬವ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:04.11.2017

## ಸುತ್ತೋಲೆ

ವಿಷಯ: ಸರ್ಕಾರಿ ಕಾರ್ಯಕ್ರಮಗಳನ್ನು ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಸಭೆ ನಡೆಸುವಾಗ ಪಾಲಿಸಬೇಕಾದ ಶಿಷ್ಟಚಾರ ಕುರಿತು.

ಉಲ್ಲೇಖ: 1.ಸುತ್ತೋಲೆ ಸಂಖ್ಯೆ:ಸಿಆಸುಇ 5 ಹೆಚ್‌ಡಬ್ಲ್ಯೂ 2012 ದಿನಾಂಕ:23.11.2012
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪತ್ರ ಸಂಖ್ಯೆ:ಗ್ರಾಅಪ 15 ಗ್ರಾನೀಸ (3) 2014 ದಿನಾಂಕ:04.02.2014
3.ಸುತ್ತೋಲೆ ಸಂಖ್ಯೆ:ಸಿಆಸುಇ 7 ರಾರಾಅ 2015 ದಿನಾಂಕ:16.07.2015

**********

ಚಿಕ್ಕೋಡಿ–ಸದಲಗಾ ಮತಕ್ಷೇತ್ರದ ವಸತಿ ರಹಿತರಿಗೆ ಮನೆ ಹಂಚಿಕೆ ಮಾಡುವ ಸಂದರ್ಭದಲ್ಲಿ ತಾಲ್ಲೂಕು ಮಟ್ಟದ ಜಾಗೃತಿ ಸಭೆಗೆ ಸ್ಥಳೀಯ ಸಂಸ್ಥೆಯ ಮಾನ್ಯ ಜನ ಪ್ರತಿನಿಧಿಗಳಿಗೆ ಸಭೆಗೆ ಆಹ್ವಾನಿಸದೇ ಶಿಷ್ಟಾಚಾರವನ್ನು ಉಲ್ಲಂಘಿಸಿರುವ ಬಗ್ಗೆ ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಚ್ಯುತಿ ಸಮಿತಿಯು ಗಂಭೀರವಾಗಿ ಪರಿಗಣಿಸಿರುತ್ತದೆ.

ಸರ್ಕಾರದ ಸಭೆ ಸಮಾರಂಭಗಳಿಗೆ ಜನ ಪ್ರತಿನಿಧಿಗಳನ್ನು ಆಹ್ವಾನಿಸುವ ಬಗ್ಗೆ ಮೇಲೆ ಉಲ್ಲೇಖಿಸಿರುವ ಸುತ್ತೋಲೆಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಹೊರಡಿಸಿರುವ ಸೂಚನೆಗಳನ್ನು ಪಾಲಿಸುವಂತೆ ಸೂಚಿಸುತ್ತಾ, ಸರ್ಕಾರಿ ಸಭೆ ಸಮಾರಂಭ ಹಾಗೂ ಕಾರ್ಯಕ್ರಮಗಳಿಗೆ ಜನಪ್ರತಿನಿಧಿಗಳನ್ನು ಆಹ್ವಾನಿಸುವ ಸಂದರ್ಭಗಳಲ್ಲಿ ಇ–ಮೇಲ್, ಫೋನ್, ಪತ್ರ ಮುಖೇನ, ಆಹ್ವಾನ ಪತ್ರಿಕೆಯನ್ನು ಅಥವಾ ಸಂದೇಶಗಳನ್ನು ಅವರುಗಳ ಆಪ್ತ ಕಛೇರಿಗಳಿಗೆ ತಪ್ಪದೇ ಕಳುಹಿಸುವ ಮೂಲಕ ಈ ರೀತಿ ಶಿಷ್ಟಾಚಾರ ಉಲ್ಲಂಘನೆ ಆಗುವುದನ್ನು ಎಚ್ಚರಿಕೆಯಿಂದ ಹಾಗೂ ಕಟ್ಟು ನಿಟ್ಟಾಗಿ ಕ್ರಮವಹಿಸುವಂತೆ ಹಾಗೂ ಇಂತಹ ಘಟನೆಗಳು ಸಂಭವಿಸದಂತೆ ಸಂಬಂಧಪಟ್ಟ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನವನ್ನು ನೀಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್‌ರವರುಗಳಿಗೆ ತಿಳಿಸಲಾಗಿದೆ.

ಈ ರೀತಿ ಮತ್ತೊಮ್ಮೆ ಶಿಷ್ಟಾಚಾರದ ಉಲ್ಲಂಘನೆಯ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಲ್ಲಿ ಸಂಬಂಧಪಟ್ಟ ಅಧಿಕಾರಿ/ನೌಕರರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದೆಂದು ಸಹ ತಿಳಿಸಲಾಗಿದೆ.

4/11/17
(ಎನ್.ವೈ.ಸಾಗರ್)
ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:–**

1. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್.
2. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯತ್.
3. ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ್.